ಕನ್ನಡ ಪೋಸ್ಟ್
ಸಂಪಾದಕ : ಮಂಜು ಬನವಾಸೆ
KANNADA POST
ಇದು ಸುದ್ದಿ ವಿಳಾಸ
ಕನ್ನಡ ದಿನಪತ್ರಿಕೆ
ಹಾಸನ | E-mail : kannadapostnews@gmail.com | / ಕನ್ನಡ post | Price: ₹1
Vol.No. 1 | Issue : 269 | Pages .02 | Date : 13.09.2025 SATURDAY | RNI NO.KARKAN/2024/89601 | Kannada Daily
ಸಂಪುಟ : 01 – ಸಂಚಿಕೆ : 269 – ಪುಟಗಳು : 02 13.09.2025 ಶನಿವಾರ | Ph : 8762954248 | ದರ : ₹1

# ಸಾವಿನ ಮೆರವಣಿಗೆ

## ಗಣೇಶ ವಿಸರ್ಜನೆ ಮೆರವಣಿಗೆ ಮೇಲೆ ಟ್ರಕ್ ಹರಿದು 8ಕ್ಕೂ ಹೆಚ್ಚು ಮಂದಿ ಸಾವು
## ಸಂಭ್ರಮದ ಡಿಜೆ ನೃತ್ಯದಿಂದ ಸೂತಕ: 25ಕ್ಕೂ ಹೆಚ್ಚು ಮಂದಿಗೆ ಗಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ತಾಲೂಕಿನ ಮೊಸಳೆ ಹೊಸಹಳ್ಳಿ ಗ್ರಾಮದಲ್ಲಿ ಗಣಪತಿ ಮೆರವಣಿಗೆ ವೇಳೆ ಜನರ ಮೇಲೆ ನುಗ್ಗಿದ ಲಾರಿಯೊಂದು ಮರಣ ಮೃದಂಗ ಬಾರಿಸಿದೆ.

ಗಣೇಶ ಮೂರ್ತಿಯನ್ನು ವಿಸರ್ಜನೆ ಮಾಡಲು ಗ್ರಾಮದ ನೂರಾರು ಮಂದಿ ರಾಷ್ಟ್ರೀಯ ಹೆದ್ದಾರಿ 373ರ ಒಂದು ಬದಿಯ ರಸ್ತೆಯಲ್ಲಿ ತೆರಳುತ್ತಿದ್ದ ವೇಳೆ ಬೃಹತ್ ಟ್ರಕ್‌ವೊಂದು ಹ-ರಿದು ಸಂಭವಿಸಿದ ಭೀಕರ ಅಪಘಾತದಲ್ಲಿ 8ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದಾರೆ. ಐವರು ಸ್ಥಳದಲ್ಲೇ ಅಸುನೀಗಿದರೆ ಉಳಿದ ಇಬ್ಬರು ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ.

ದುರಂತದಲ್ಲಿ 25ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದು, ಹಲವರ ಸ್ಥಿತಿ ಗಂಭೀರವಾಗಿದೆ. ಹೀಗಾಗಿ ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ. ಗಾಯಾಳುಗಳನ್ನು ಸ್ಥಳೀಯ ಸಮುದಾಯ ಆರೋಗ್ಯ ಕೇಂದ್ರ ಹಾಗೂ ಹಾಸನದ ಹಿಮ್ಸ್ ಆಸ್ಪತ್ರೆ ಮತ್ತು ವಿವಿಧ ಖಾಸಗಿ ಆಸ್ಪತ್ರೆಗಳಿಗೆ ರವಾನೆ ಮಾಡಲಾಗಿದೆ.

ಹಿಮ್ಸ್ ಆಸ್ಪತ್ರೆಗೆ ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್, ಎಂಎಲ್‌ಸಿ ಡಾ.ಸೂರಜ್ ರೇವಣ್ಣ ಭೇಟಿ ನೀಡಿ ಗಾಯಾಳುಗಳ ಯೋಗಕ್ಷೇಮ ವಿಚಾರಿಸಿದರು.

ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಡರಾತ್ರಿ ಆಸ್ಪತ್ರೆಗೆ ಭೇಟಿ ನೀಡಿದ್ದರು.



ದುರಂತಕ್ಕೆ ಮೊದಲು ಬೈಕ್ ಗೆ ಡಿಕ್ಕಿ ಹೊಡೆದ ಲಾರಿ

### ಬೈಕ್ ಗೆ ಡಿಕ್ಕಿಯಾಗಿ ನಿಯಂತ್ರಣ ಕಳೆದುಕೊಂಡ ಲಾರಿ

ಹಾಸನ: ಮೊಸಳೆ ಹೊಸಹಳ್ಳಿಯಲ್ಲಿ ಗಣಪತಿ ವಿಸರ್ಜನೆ ಮೆರವಣಿಗೆಯಲ್ಲಿ ನೃತ್ಯ ಮಾಡುತ್ತಿದ್ದವರ ಮೇಲೆ ಹರಿದು ಏಳು ಜನರನ್ನು ಬಲಿಪಡೆದ ಲಾರಿ ಅದಕ್ಕೂ ಮೊದಲು ರಸ್ತೆಯ ಎಡಬದಿಯಲ್ಲಿ ಎದುರಿನಿಂದ ಬಂದ ದ್ವಿಚಕ್ರ ವಾಹನವೊಂದಕ್ಕೆ ಡಿಕ್ಕಿಯಾಗಿ ನಿಯಂತ್ರಣ ಕಳೆದುಕೊಂಡು ಜನರ ಕಡೆ ನುಗ್ಗಿರುವುದು ವಿಡಿಯೋದಲ್ಲಿ ದಾಖಲಾಗಿದೆ.



ಜನರ ಮೇಲೆ ನುಗ್ಗಿದ ಲಾರಿ

> ಈ ರೀತಿಯ ದುರಂತ ನಡೆಯಬಾರದಿತ್ತು. ಇದಕ್ಕೆ ಕಾರಣ ಏನು ಎಂಬುದನ್ನು ಮೊದಲು ತಿಳಿದುಕೊಳ್ಳಬೇಕು. ಅಧಿಕಾ-ರಿಗಳು ಸ್ಥಳಕ್ಕೆ ಬಂದಿದ್ದಾರೆ. ತನಿಖೆ ನಡೆಸಲು ಎಸ್ಪಿ ಅವರಿಗೆ ಸೂಚನೆ ನೀಡಿದ್ದೇನೆ. ಗಾಯಾಳುಗಳನ್ನು ವಿವಿಧ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ಜನರು ಸಹಕರಿಸಬೇಕು.
> –ಶ್ರೇಯಸ್ ಪಟೇಲ್, ಸಂಸದ

### ಪೊಲೀಸ್ ವೈಫಲ್ಯ ಕಾರಣ

ದುರಂತಕ್ಕೆ ಪೊಲೀಸ್ ವೈಫಲ್ಯ ಕಾರಣ ಎಂದು ಮಾಜಿ ಸಚಿವ ಹೆಚ್.ಡಿ.ರೇವಣ್ಣ ಆರೋಪಿಸಿದರು. ಘಟನಾ ಸ್ಥಳಕ್ಕೆ ಆಗಮಿಸಿ ಸ್ಥಳೀಯರಿಂದ ಮಾಹಿತಿ ಪಡೆದು ಮಾತನಾಡಿದ ಅವರು, ಮೆರವಣಿಗೆ ಹಿನ್ನೆಲೆಯಲ್ಲಿ ಪೊಲೀಸರು ಬ್ಯಾರಿಕೇಡ್ ಹಾಕಿ ಮುನ್ನೆಚ್ಚರಿಕೆ ವಹಿಸಬೇಕಿತ್ತು. ಎರಡೂ ಕಡೆ ಚಲಿಸುವ ವಾಹನಗಳಿಗೆ ಸೂಚನೆ ಕೊಡಬೇಕಿತ್ತು. ಅದಾವುದನ್ನೂ ಮಾಡದೇ ಇರುವುದರಿಂದ ದುರಂತ ಸಂಭವಿಸಿದೆ. ರಾಜ್ಯ ಸರ್ಕಾರ ಈ ಬಗ್ಗೆ ಸಮಗ್ರ ತನಿಖೆ ನಡೆಸಬೇಕು. ಮೃತರ ಕುಟುಂಬಕ್ಕೆ 10 ರಿಂದ 20 ಲಕ್ಷ ಪರಿಹಾರ ಕೊಡಬೇಕು. ಗಾಯಾಗಳು ಚಿಕಿತ್ಸಾ ವೆಚ್ಚವನ್ನು ಸಂಪೂರ್ಣವಾಗಿ ಭರಿಸಬೇಕು ಎಂದು ಒತ್ತಾಯಿಸಿದರು.


**ನಡೆದಿದ್ದೇನು?**

ಶುಕ್ರವಾರ ರಾತ್ರಿ ಗಣೇಶ ವಿಸರ್ಜನೆ ಮೆರವಣಿಗೆ ನಡೆಯುತ್ತಿತ್ತು. ಸಾವಿರಾರು ಮಂದಿ ಭಾಗಿಯಾಗಿದ್ದರು. ಡಿಜೆ ಹಾಡಿಗೆ ಎಲ್ಲರೂ ಕುಣಿದು ಕುಪ್ಪಳಿಸುತ್ತಿದ್ದರು. ಮಕ್ಕಳು-ಯುವಕರ ಸಂತಸಕ್ಕೆ ಪಾರವೇ ಇರಲಿಲ್ಲ. ರಾತ್ರಿ 7.45 ರಿಂದ 8 ಗಂಟೆ ಸುಮಾರಿಗೆ ಹಾಸನದಿಂದ ಹೊಳೆನರಸೀಪುರ ಕಡೆಗೆ ವೇಗವಾಗಿ ಬಂದ ಟ್ರಕ್, ಎಡಬದಿಯ ರಸ್ತೆ ಡಿವೈಡರ್ ದಾಟಿ, ಇನ್ನೊಂದು ಬದಿಯ ರಸ್ತೆಯಲ್ಲಿ ಗಣೇಶನ ಹಿಂದೆ ಸಾಗಿ ಬರುತ್ತಿದ್ದವರ ಮೇಲೆ ನುಗ್ಗಿ ಹಲವು ಮಂದಿಯನ್ನು ಬಲಿ ಪಡೆದು, 25ಕ್ಕೂ ಹೆಚ್ಚು ಮಂದಿಯ ನೋವು, ಕಣ್ಣೀ-ರಿಗೆ ಕಾರಣವಾಗಿದೆ. ತಮ್ಮ ಕಡೆಯವರನ್ನು ಕಳೆದು ಕೊಂಡವರು ಹಾಗೂ ಗಾಯಾಳು ಗಳ ಕಡೆಯವರ ಆಕ್ರಂದನ ಮುಗಿಲು ಮುಟ್ಟಿತ್ತು. ಎಲ್ಲರೂ ಸಂಭ್ರಮದಲ್ಲಿದ್ದ ವಾತಾವರಣ ಕೆಲವೇ ಕ್ಷಣಗಳಲ್ಲಿ ಕಣ್ಣೀರಿನ ಕಣವಾಯಿತು.

ಸುದ್ದಿ ತಿಳಿದ ಕೂಡಲೇ ಮಾಜಿ ಸಚಿವ ಹೆಚ್.ಡಿ.ರೇವಣ್ಣ, ಸಂಸದ ಶ್ರೇಯಸ್ ಪಟೇಲ್, ಜಿಲ್ಲಾಧಿಕಾರಿ ಲತಾಕುಮಾರಿ ಕೆ.ಎಸ್., ಎಸ್ಪಿ ಮೊಹಮ್ಮದ್ ಸುಜೀತಾ ಹಾಗೂ ಇತರೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದರು.







### ಕರ್ತವ್ಯ ಲೋಪ: ಎಂ. ಶಿವರ ಪಿಡಿಒ ಅಮಾನತು

ಚನ್ನರಾಯಪಟ್ಟಣ: ಗಾಜಿನ ಮದ್ಯದ ಬಾಟಲಿಯಿಂದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮೇಲೆ ಹಲ್ಲೆ ನಡೆಸಿದ್ದ ಎಂ. ಶಿವರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರಾಮಸ್ವಾಮಿ ಅವರನ್ನು ಅಮಾನತು ಮಾಡಿ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ ಆದೇಶಿಸಿದ್ದಾರೆ.

ಆ. 28 ರಂದು ಗೋವಿನಕೆರೆ ಗ್ರಾಪಂ ಸದಸ್ಯ ರಾಮು ಅವರ ಮನೆಗೆ ಊಟಕ್ಕೆಂದು ಬಂದಾಗ ಘಟನೆ ನಡೆದಿತ್ತು. ಮನೆಯ ಮಹಡಿ ಮೇಲೆ ಮದ್ಯಪಾನ ಮಾಡುತ್ತಿದ್ದಾಗ ತಾಲ್ಲೂಕು ಸರ್ಕಾರಿ ನೌಕರರ ಸಂಘದ ಚುನಾವಣೆ ವಿಚಾರ ಪ್ರಸ್ತಾಪಿಸಿ ಗಲಾಟೆ ಮಾಡಿಕೊಂಡಿದ್ದರು. ರಾಮಸ್ವಾಮಿ ಹಿರೀಸಾವೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕೆ.ಜೆ. ಸತೀಶ್ ಅವರಿಗೆ ಗಾಜಿನ ಬಾಟಲಿಯಿಂದ ಹೊಡೆದು ಗಾಯಗೊಳಿಸಿದ್ದರು. ಈ ಸಂಬಂಧ ಚನ್ನರಾಯಪಟ್ಟಣ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

# ವಸತಿ ಅಕ್ರಮದಲ್ಲಿ ಪಿಡಿಒಗಳ ಪಾತ್ರವಿಲ್ಲ

## ತನಿಖೆಗೆ ಆಗ್ರಹಿಸಿ ಸಚಿವರಿಗೆ ಪತ್ರ । ಸುಖಾಸುಮ್ಮನೆ ಆರೋಪಕ್ಕೆ ಬೇಸರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ) ಸಕಲೇಶಪುರ ತಾಲ್ಲೂಕಿನ ಫಲಾನುಭವಿಗಳಿಗೆ ಮೀಸಲಾದ ಅನುದಾನವನ್ನು ದುರುಪಯೋಗಪಡಿಸಿಕೊಂಡು ತಾಲ್ಲೂಕಿನ ಬೇರೆ ವ್ಯಕ್ತಿಗಳ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಿದ ಪ್ರಕರಣದಲ್ಲಿ ಗ್ರಾ.ಪಂ. ಅಭಿವೃದ್ಧಿ ಅಧಿಕಾ-ರಿಗಳ ಪಾತ್ರವಿಲ್ಲವೆಂದು ಜಿಲ್ಲೆಯ ಪಿಡಿಒಗಳು ಸ್ಪಷ್ಟಪಡಿಸಿದ್ದಾರೆ.

ಈ ಬಗ್ಗೆ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಯೊಬ್ಬರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ ಖರ್ಗೆ ಅವ-ರಿಗೆ ಪತ್ರ ಬರೆದು ತನಿಖೆಗೆ ಒತ್ತಾಯಿಸಿದ್ದಾರೆ. ವಸತಿ ಯೋಜನೆಯಡಿ ನಡೆದಿರುವ ಅಕ್ರಮದಲ್ಲಿ ಜಿಲ್ಲಾ ಮತ್ತು ತಾ.ಪಂ. ಅಧಿಕಾರಿಗಳನ್ನು ಬಿಟ್ಟು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಬಲಿಪಶು ಮಾಡಲಾಗುತ್ತಿದೆ ಎಂದು ಆರೋಪಿಸಿ ಅವರು ಅಳಲು ತೋಡಿಕೊಂಡಿದ್ದಾರೆ.

ಪಿಎಂಎವೈ ಯೋಜನೆಯಡಿ ಫಲಾನುಭವಿಗಳ ಆಯ್ಕೆ, ಗುರಿ ನಿಗದಿ, ಫಲಾನುಭವಿ ಪಟ್ಟಿ ಮಾಡಿ ಅನುಮೋದನೆ ಪಡೆಯುವುದು, ಪ್ರಸ್ತಾವನೆ ಸಲ್ಲಿಸುವುದು, ತಂತ್ರಾಂಶ ಲಾಗಿನ್ ಬಳಸಲು ನಮಗೆ ಅವಕಾಶ ನೀಡಿಲ್ಲ. ಆದ್ದರಿಂದ ವಸತಿ ಯೋಜನೆಯಡಿ ಅನುದಾನ ದುರ್ಬಳಕೆ ಆಗಿರುವುದರಲ್ಲಿ ಪಿಡಿಒಗಳ ಪಾತ್ರವಿಲ್ಲ, ನಮ್ಮ ಮೇಲೆ ಕ್ರಮ ಸರಿಯಲ್ಲ ಎಂದು ಪತ್ರದಲ್ಲಿ ಸ್ಪಷ್ಟಪಡಿಸಿದ್ದಾರೆ.

2024–25ನೇ ಸಾಲಿಗೆ ಪಿಎಂಎವೈ(ಜಿ) ಯೋಜನೆಯಲ್ಲಿ ಗ್ರಾ.ಪಂ. ಮಟ್ಟದಲ್ಲಿ ಸರ್ವೆ ನಡೆಸಲಾಗಿದ್ದು, ಫಲಾನುಭವಿಗಳ ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ವಿವರಗಳನ್ನು ಸರಿಯಾಗಿ ದಾಖಲಿಸಲಾಗಿತ್ತು. ಆದರೆ, ತಾಲ್ಲೂಕು ಮಟ್ಟದ ಲಾಗಿನ್ ಬಳಸಿ ಈ ವಿವರಗಳನ್ನು ತಿರುಚಲಾಗಿದ್ದು, 294 ಫಲಾನುಭವಿಗಳ ಹಣವನ್ನು ಅನ್ಯರ ಖಾತೆಗಳಿಗೆ ಬಿಡುಗಡೆ ಮಾಡಲಾಗಿದೆ ಎಂದು ಆರೋಪಿಸಲಾಗಿದೆ. ಜಿಪಿ-ಎಸ್ ಸ್ಥಳಗಳನ್ನು ಬದಲಾಯಿಸಿ ಬೇಲೂರು ಮತ್ತು ಹಾಸನ ಸುತ್ತಮುತ್ತಲಿನ ಪ್ರದೇಶಗಳನ್ನು ತೋರಿಸಲಾಗಿದೆ. ಇದು ಸಕಲೇಶ ಪುರ ತಾಲ್ಲೂಕಿನ ಮಾಜಿ ವಸತಿ ನೋಡಲ್ ಅಧಿಕಾರಿ ರಾಜೇಶ್ ಅವರ ವಾಸಸ್ಥಳಕ್ಕೆ ಸಂಬಂಧಿಸಿದ್ದು ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ಗ್ರಾಮ ಪಂಚಾಯತ್‌ಗೆ ಈ ಯೋಜನೆಯಲ್ಲಿ ನೇರ ಲಾಗಿನ್ ಮತ್ತು ಪಾಸ್‌ವರ್ಡ್ ಇಲ್ಲದ ಕಾರಣ, ಬದಲಾವಣೆಗಳನ್ನು ಮಾಡುವ ಅಧಿಕಾರವಿಲ್ಲ ಎಂದು ಪತ್ರದಲ್ಲಿ ಸ್ಪಷ್ಟಪಡಿಸಲಾಗಿದೆ. ಎಲ್ಲಾ ಪ್ರಕ್ರಿಯೆಗಳು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ನಡೆದಿರುವುದರಿಂದ, ಗ್ರಾಮ ಪಂಚಾಯಿತಿಯಲ್ಲಿ ಯಾವ ಪ್ರಕ್ರಿಯೆ ನಡೆಯುವುದಿಲ್ಲ ಎಂದು ಅಧಿಕಾರಿಗಳು ಹೇಳಿದ್ದಾರೆ. ಇದಕ್ಕೆ ಸಂಬಂಧಿಸಿದಂತೆ ರಾಜೀವ್ ಗಾಂಧಿ ವಸತಿ ನಿಗಮದ ವೆಬ್‌ಸೈಟ್‌ನಲ್ಲಿ ಗುರಿ ನಿಗದಿಯ ಮಾಹಿತಿ ಲಭ್ಯವಿಲ್ಲದಿರುವುದು ಮತ್ತು ಯಾವುದೇ ಆದೇಶ ಪತ್ರಗಳು ಬಂದಿಲ್ಲ ಎಂದು ತಿಳಿಸಲಾಗಿದೆ.

ಯೋಜನೆಯಲ್ಲಿ ಅಕ್ರಮ ನಡೆದಿರುವುದನ್ನು ತನಿಖೆ ಮಾಡಿ ಕ್ರಮ ಕೈಗೊಳ್ಳಬೇಕು ಎಂದು ಕೋರಲಾಗಿದೆ. ಇದು ಸರ್ಕಾರಿ ಯೋಜನೆಗಳಲ್ಲಿ ಪಾರದರ್ಶಕತೆಯ ಕೊರತೆಯನ್ನು ಬೆಳಕಿಗೆ ತರುತ್ತಿದ್ದು, ಸಚಿವರು ಈ ಬಗ್ಗೆ ತನಿಖೆಗೆ ಆದೇ ಶ ನೀಡುವ ಸಾಧ್ಯತೆಯಿದೆ.



> ಜಿಲ್ಲಾ ಪಂಚಾಯಿತಿ ಮೇಲಾಧಿಕಾರಿಗಳ ಗಮನಕ್ಕೆ ಬಾರದೆ ಅಕ್ರಮ ನಡೆದಿರಲು ಸಾಧ್ಯವೇ ಇಲ್ಲ. ಈ ಸಂಬಂಧ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರ ಗಮನಕ್ಕೆ ತರಲಾಗಿದೆ.
> –ಸಿಮೆಂಟ್ ಮಂಜು, ಶಾಸಕ

### ಸಚಿವರ ಭೇಟಿಯಾದ ಶಾಸಕರು

ಹಾಸನಾಂಬ ಜಾತ್ರಾ ಮಹೋತ್ಸವ ಪೂರ್ವ ಸಿದ್ಧತೆ ಅಂಗವಾಗಿ ಜಿಲ್ಲೆಯ ಜನಪ್ರತಿನಿಧಿಗಳೊಂದಿಗೆ ಶುಕ್ರವಾರ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ನಡೆಸಿದ ಸೌಹಾರ್ದ ಸಭೆಯಲ್ಲೂ ವಸತಿ ಯೋಜನೆ ಗೋಲಾಲ್ ವಿಚಾರ ಚರ್ಚಿಸಲಾಯಿತು.

ಕೇವಲ ನೋಡಲ್ ಅಧಿಕಾರಿಯಿಂದ ಕೋಟ್ಯಂತರ ರೂಪಾಯಿ ಅವ್ಯವಹಾರವಾಗಲು ಸಾಧ್ಯವಿಲ್ಲ. ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಹಾಗೂ ಮುಖ್ಯ ಲೆಕ್ಕಾಧಿಕಾ-ರಿಗಳಿಗೂ ವಿಚಾರ ಗೊತ್ತಿರುತ್ತದೆ. ಪ್ರಕರಣದ ಸಮಗ್ರ ತನಿಖೆ ನಡೆದರಷ್ಟೇ ಸತ್ಯ ಗೊತ್ತಾಗುತ್ತದೆ. ಪ್ರಕರಣದ ತನಿಖೆ ನಡೆಸಬೇಕೆಂದು ಜಿಲ್ಲೆಯ ಶಾಸಕರು ಒತ್ತಾಯಿಸಿದರು.

### ಕನ್ನಡ ಜಾಗೃತಿ ಸಮಿತಿ ಸದಸ್ಯರಾಗಿ ಪತ್ರಕರ್ತ ಕೆ.ಜಿ. ಸುರೇಶ್



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ರಾಜ್ಯದಲ್ಲಿ ಕನ್ನಡ ಅಭಿವೃದ್ಧಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಕನ್ನಡ ಜಾಗೃತಿ ಸಮಿತಿಗೆ ಅಧಿಕಾರೇತರ ಸದಸ್ಯರನ್ನು ಸರ್ಕಾರ ನೇಮಕ ಮಾಡಿದ್ದು ಹಾಸನದ ಪತ್ರಕರ್ತ ಕೆ.ಜಿ. ಸುರೇಶ್ ಸ್ಥಾನ ಪಡೆದಿದ್ದಾರೆ.

ಕೆ.ಜಿ. ಸುರೇಶ್, ಎ.ಆರ್. ಸುದರ್ಶನ್ ಬಾಬು, ರತಿ, ಕೆ. ರಾಘವೇಂದ್ರಕುಮಾರ್, ಬಿ.ಆರ್. ಪುಟ್ಟೇಗೌಡ ಸೇರಿ ಜಿಲ್ಲೆಯ ಐವರನ್ನು ಪರಿಗಣಿಸಲಾಗಿದೆ.

ರಾಜ್ಯದ 11 ಮಹಾನಗರ ಪಾಲಿಕೆ, ಬೆಂಗಳೂರು ಮಹಾನಗರ ಪಾಲಿಕೆಯ ವಿಧಾನಸಭಾ ಕ್ಷೇತ್ರ ಹಾಗು ರಾಜ್ಯದ 30 ಜಿಲ್ಲೆಗಳಲ್ಲಿ ಕನ್ನಡ ಜಾಗೃತಿ ಸಮಿತಿಗೆ ಸದಸ್ಯರ ನೇಮಿಸಲಾಗಿದೆ. ಪ್ರತಿ ಜಿಲ್ಲೆಗೆ 5 ಸದಸ್ಯರಂತೆ 31 ಜಿಲ್ಲೆಗಳಿಗೆ 155 ಸದಸ್ಯರು, ಮಹಾನಗರ ಪಾಲಿಕೆಗೆ ತಲಾ 6 ರಂತೆ 66 ಹಾಗೂ ಬೆಂಗಳೂರಿನ 28 ವಿಧಾನಸಭಾ ಕ್ಷೇತ್ರಗಳಿಗೆ 249 ಸದಸ್ಯರನ್ನು ನೇಮಕ ಮಾಡಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಕೆ.ಆರ್. ರಮೇಶ್ ತಿಳಿಸಿದ್ದಾರೆ.

### ಒಕ್ಕಲಿಗ ಧರ್ಮ ಮಹಾಸಭಾ ಅಸ್ತಿತ್ವಕ್ಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಒಕ್ಕಲಿಗ ಧರ್ಮ ಮಹಾಸಭಾ ಜಿಲ್ಲಾ ಘಟಕ ಉದ್ಘಾಟನೆ ಹಾಗೂ ಜನಗಣತಿ ಒಕ್ಕಲಿಗರ ಜಾಗೃತ ಸಭೆಯನ್ನು ಸೆ.15ರ ಸೋಮವಾರ ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಹಮಿಕೊಳ್ಳಲಾಗಿದೆ ಎಂದು ಒಕ್ಕಲಿಗ ಧರ್ಮ ಮಹಾಸಭಾದ ಜಿಲ್ಲಾಧ್ಯಕ್ಷೆ ಭಾರತಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿ, ಕುಣಿಗಲ್ ತಾಲ್ಲೂಕು ಕಿತ್ತಮಂಗಲ ಅರೆ ಶಂಕರ ಮಠದ ಮಠಾಧೀಶ ಶ್ರೀ ಸಿದ್ದರಾಮಯ್ಯ ಚೈತನ್ಯ ಸ್ವಾಮೀಜಿ ಉದ್ಘಾಟನೆ ನೆರವೇರಿಸಲಿದ್ದಾರೆ.



ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಪಿ. ಸ್ವರೂಪ್, ಮಾಜಿ ಶಾಸಕ ಪ್ರೀತಮ್ ಗೌಡ, ಮಹಾನಗರ ಪಾಲಿಕೆ ಪ್ರಭಾರ ಮೇಯರ್ ಹೇಮಲತಾ, ಜಿಲ್ಲಾಧಿಕಾರಿ ಕೆ. ಎಸ್. ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮದ್ ಸುಜೀತಾ, ತಹಶೀಲ್ದಾರ್ ಗೀತಾ, ಪಾಲಿಕೆ ಮೇಯರ್ ಆರ್. ಕೃಷ್ಣಮೂರ್ತಿ, ಕಾಂಗ್ರೆಸ್ ಮುಖಂಡ ದೇವ ರಾಜೇಗೌಡ ಸೇರಿ ಮತ್ತಿತರರು ಭಾಗವಹಿಸಲಿದ್ದಾರೆ ಎಂದರು. ಸಮುದಾಯದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಹಾಸಭಾ ಮುಖಂಡರಾದ ದೇವರಾಜ್, ರಂಗಸ್ವಾಮಿ, ಶ್ರೀನಿವಾಸ್, ನಾಗಲಕ್ಷ್ಮಿ ಇದ್ದರು.

### ಕೆಪಿಸಿಸಿ ಕಾರ್ಮಿಕ ವಿಭಾಗ ಉಪಾಧ್ಯಕ್ಷರಾಗಿ ಗೋಪಾಲೇಗೌಡ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿದ್ದ ನನ್ನನ್ನು ಗುರುತಿಸಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ಕೆಪಿಸಿಸಿ ಕಾರ್ಮಿಕ ವಿಭಾಗದ ರಾಜ್ಯ ಉಪಾಧ್ಯಕ್ಷ ನನ್ನಾಗಿ ನೇಮಕ ಮಾಡಿದ್ದಾರೆ ಎಂದು ಮರ್ಕುಲಿ ಗೋಪಾಲೇಗೌಡ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿ, ಎಐಸಿಸಿ ಸದಸ್ಯ ಬಿ. ಶಿವರಾಂ ಅವರ ಶಿಫಾರಸ್ಸಿನ ಮೇರೆಗೆ ತಮನ್ನು ತಕ್ಷಣದಿಂದ ಜಾ-ರಿಗೆ ಬರುವಂತೆ ಕಾರ್ಮಿಕ ವಿಭಾಗದ ಉಪಾಧ್ಯಕ್ಷನಾಗಿ ನೇಮಿಸಲಾಗಿದೆ ಎಂದರು.

ನನ್ನ ಮೇಲೆ ವಿಶ್ವಾಸವಿಟ್ಟು ನೀಡಿರುವ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ, ನಿಷ್ಠೆಯಿಂದ ನಿಭಾಯಿಸುವೆ. ರಾಜ್ಯ ಮತ್ತು ಜಿಲ್ಲಾ ಕಾಂಗ್ರೆಸ್ ಸಮಿತಿಯ ಮಾರ್ಗದರ್ಶನದಲ್ಲಿ ಸ್ಥಳೀಯ ನಾಯಕರ ಸಹಕಾರದೊಂದಿಗೆ ಪಕ್ಷ ಸಂಘಟನೆ ಮಾಡುವುದಾಗಿ ತಿಳಿಸಿದರು.

ಹಾಸನ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಆಕಾಂಕ್ಷಿಗಳಲ್ಲಿ ನಾನೂ ಒಬ್ಬನಾಗಿದ್ದೇನೆ. ನನಗೆ ಜವಾಬ್ದಾರಿ ನೀಡಿದರೆ ನಿಭಾಯಿಸುವೆ ಎಂದು ಪ್ರಶ್ನೆಗೆ ಉತ್ತರಿಸಿದರು.

ಕಾಂಗ್ರೆಸ್ ಮುಖಂಡರಾದ ಶಿವಣ್ಣ ಅರಸೀಕೆರೆ, ದೇವರಾಜೇಗೌಡ, ಗಿರೀಶ್, ಸತೀಶ್ ಇದ್ದರು.

### ಸುಸ್ಥಿರ ಅಭಿವೃದ್ಧಿಯಲ್ಲಿ ಭಾರತಕ್ಕೆ 99ನೇ ಸ್ಥಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸುಸ್ಥಿರ ಅಭಿವೃದ್ಧಿಯಲ್ಲಿ ಭಾರತ 99ನೇ ಸ್ಥಾನ ಪಡೆದಿದೆ ಎಂದು ನಿವೃತ್ತ ಸಹ ಪ್ರಾಧ್ಯಾಪಕಿ ಜೆ. ದೇವ ಕುಮಾರಿ ಹೇಳಿದರು.

ನಗರದ ಆರ್.ಸಿ. ರಸ್ತೆಯ ಗಂಧದ ಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅರ್ಥಶಾಸ್ತ್ರ ವಿಭಾಗದ ವತಿಯಿಂದ ಹಮಿಕೊಂಡಿದ್ದ ಸಮಕಾಲೀನ ಭಾರತೀಯ ಆರ್ಥಿಕತೆ–ಪ್ರಸ್ತುತ ಸಮಸ್ಯೆಗಳು ಮತ್ತು ಸವಾಲುಗಳು ಎಂಬ ವಿಷಯದ ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಭಾರತದ ಆರ್ಥಿಕತೆಯ ಹಿನ್ನೆಲೆಯನ್ನು ತಿಳಿದುಕೊಂಡಾಗ ಭಾರತ ತುಂಬಾ ಹಿಂದೆ ಉಳಿದಿತ್ತು ಎಂದು ತಿಳಿಸಿದರು.

ಬ್ರಿಟಿಷರ ಅವಧಿಯಲ್ಲಿ ಜಿಡಿಪಿ ಕುಸಿದು ಹೋಗಿ-ತ್ತು. ಇದಕ್ಕೆ ಕಾರಣ ಕೃಷಿ ಕ್ಷೇತ್ರ ಹಿಂದುಳಿದಿರುವುದಾಗಿದೆ. ನೀತಿ ಆಯೋಗ ರಚನೆ ಮಾಡಿದ ಬಳಿಕ ಸುಸ್ಥಿರ ಅಭಿವೃದ್ಧಿಯನ್ನು ವಿಶ್ವಸಂಸ್ಥೆ ಅಳವಡಿಸಿಕೊಂಡಿತ್ತು. ವಿಶ್ವ ಸಂಸ್ಥೆಯ ಪ್ರಕಾರ ಯಾವುದೇ ದೇಶ ಅಭಿವೃದ್ಧಿಗೆ ಪೂರಕವಾಗಿರಬೇಕು. ನಾವು ಅಭಿವೃದ್ಧಿ ಸಾಧಿಸಬೇಕು ಎಂದರು.

ಸಂಪನೂಲಗಳನ್ನು ಮಿತವಾಗಿ ಬಳಸುವುದರೊಂದಿಗೆ ನಮ ಮುಂದಿನ ಪಿಳಿಗೆಗೆ ಸುಭದ್ರ ಆರ್ಥಿಕತೆಯನ್ನು ಕಟ್ಟಿಕೊಡಬೇಕು. ದೇಶದ ಯುವ ಸಮುದಾಯ ದೇಶದ ಆರ್ಥಿಕತೆಯ ಬಗ್ಗೆ ತಿಳಿದುಕೊಂಡು ದೇಶದ ಪ್ರಗತಿಗೆ ಸಹಕಾರಿಯಾಗಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಮಾತನಾಡಿ, ವಿದ್ಯಾರ್ಥಿಗಳು ಅರ್ಥ ಶಾಸ್ತ್ರವನ್ನು ಸರಳವೆಂದು ಭಾವಿಸಿ ಅರ್ಥೈಸಿಕೊಳ್ಳಲು ಪ್ರಯತ್ನಿಸಬೇಕು, ಕಲಿಯಬೇಕು, ಪ್ರೋತ್ಸಾಹಿಸಬೇಕು. ಅರ್ಥ ಶಾಸ್ತ್ರ ವಿಷಯದಲ್ಲಿ ಉದ್ಯೋಗ ವಕಾಶಗಳು ವ್ಯಾಪಕವಾಗಿದ್ದು, ಅವಕಾಶಗಳನ್ನು ಬಳಕೆ ಮಾಡಿ ಕೊಳ್ಳಬೇಕಾದಲ್ಲಿ, ಕಠಿಣ ಪ್ರಯತ್ನ, ವಿನಯ-ವಿನಮ್ರತೆ, ಶಿಸ್ತು ಎಲ್ಲವೂ ಅವಶ್ಯಕವಾಗಿರುತ್ತದೆ. ಮಾನವರ ಜೀವನದಲ್ಲಿ ಅರ್ಥಶಾಸ್ತ್ರವು ಮುಖ್ಯ ಪಾತ್ರವನ್ನು ವಹಿಸಿದೆ, ಒಂದು ಉತ್ತಮ ಬದುಕು ಸಾಗಿಸಲು ಅರ್ಥಶಾಸ್ತ್ರವು ತುಂಬ ಮುಖ್ಯವಾಗಿರುತ್ತದೆ. ಅರ್ಥಶಾಸ್ತ್ರ ವಿಭಾಗದ ವಿದ್ಯಾರ್ಥಿಗಳು ಅರ್ಥ ಶಾಸ್ತ್ರದಲ್ಲಿ ಹೆಚ್ಚು ಸಾಧನೆ ಮಾಡಬೇಕು ಎಂದು ತಿಳಿಸಿದರು.

ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥೆ ಎಂ.ವಿ. ಹೇಮಾವತಿ, ಐ.ಕ್ಯೂ.ಎ.ಸಿ. ಸಂಚಾಲಕ ಜೆ.ಆರ್. ಮೋಹನ್ ಕುಮರ್, ಸಹ ಸಂಚಾಲಕಿ ಡಿ.ಜೆ. ರಮ್ಯ, ಅಧ್ಯಾಪಕಿ ಡಾ. ಸುನೀತ ಹಾಗೂ ಇತರರು ಹಾಜರಿದ್ದರು.



# ಕೌಟುಂಬಿಕ ಕಲಹ: ಅತ್ತೆಯನ್ನೇ ಕೊಂದ ಅಳಿಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್


ಕೊಣನೂರು: ಅಳಿಯನ ಕಿರುಕುಳದಿಂದ ಹಿಂಸೆ ಅನುಭವಿಸುತ್ತಿದ್ದ ಮಗಳನ್ನು ಕರೆದುಕೊಂಡು ಬಂದಿದ್ದಕ್ಕೆ ಆಕ್ರೋಶಗೊಂಡ ಅಳಿಯ ಮನೆಗೆ ಬಂದು ಅತ್ತೆಯನ್ನು ಚಾಕುವಿನಿಂದ ಇರಿದು ಕೊಲೆಗೈದಿರುವ ಘಟನೆ ರಾಮನಾಥಪುರದಲ್ಲಿ ನಡೆದಿದೆ.

ರಾಮನಾಥಪುರದ ಫೈರೋಜ್ ಅಹದ್ (55) ಮೃತರು. ಬೆಟ್ಟದಪುರದ ರಸುಲ್ ಕೊಲೆ ಆರೋಪಿ. ಜಹೀರ್ ಅಹದ್ ಹಾಗೂ ಫೈರೋಜ್ ಅಹದ್ ಪುತ್ರಿ ಸಮೀರಾ ಅವರನ್ನು ಒಂಬತ್ತು ವರ್ಷಗಳ ಹಿಂದೆ ಬೆಟ್ಟದಪುರದ ರಸುಲ್‌ಗೆ ಕೊಟ್ಟು ಮದುವೆ ಮಾಡಲಾಗಿತ್ತು. ಸಣ್ಣಪುಟ್ಟ ಕೆಲಸ ಮಾಡಿಕೊಂಡಿದ್ದ ರಸುಲ್ ಆರಂಭದಲ್ಲಿ ಚೆನ್ನಾಗಿಯೇ ಇದ್ದ. ಕಳೆದ ಎರಡು ತಿಂಗಳಿಂದ ಮದ್ಯವ್ಯಸನಿಯಾಗಿ ಹೆಂಡತಿಗೆ ಚಿತ್ರಹಿಂಸೆ ನೀಡುತ್ತಿದ್ದ. ಮನೆಗೆ ದಿನಸಿ, ತರಕಾರಿ ತಂದುಕೊಡದೆ ಹಣವನ್ನೆಲ್ಲಾ ಕುಡಿತಕ್ಕೆ ಖರ್ಚು ಮಾಡುತ್ತಿದ್ದ. ಹೆಂಡತಿ ಜೊತೆಗೆ ಸುಖಾ ಸುಮನೆ ಜಗಳ ಮಾಡುತ್ತಿದ್ದ. ಅದರಿಂದ ಬೇಸತ್ತಿದ್ದ ಸಮೀರಾ ತಂದೆ–ತಾಯಿಗೆ ವಿಷಯ ತಿಳಿಸಿದ್ದರು.

ಗುರುವಾರ ಬೆಳಿಗ್ಗೆ ಸಂಬಂಧಿಕರೆಲ್ಲ ಬೆಟ್ಟದಪುರಕ್ಕೆ ತೆರಳಿ ಸಮೀರಾ ಅವರನ್ನು ರಾಮನಾಥಪುರದ ತವರು ಮನೆಗೆ ಕರೆತಂದಿದ್ದರು. ಅವರನ್ನೇ ಹಿಂಬಾಲಿಸಿಕೊಂಡು ಬಂದಿದ್ದ ರಸುಲ್ ಏಕಾಏಕಿ ಮನೆಯೊಳಗೆ ನುಗ್ಗಿದ್ದಾನೆ. ತನ್ನ ಜೊತೆಗೆ ಬರುವಂತೆ ಹೆಂಡತಿ ಜೊತೆಗೆ ಗಲಾಟೆ ಮಾಡುತ್ತಿದ್ದಾಗ ಜಗಳ ಬಿಡಿಸಲು ಬಂದ ಅತ್ತೆ ಫೈರೋಜ್ ಅವರ ಎದೆಗೆ ಚಾಕುವಿನಿಂದ ಇರಿದಿದ್ದಾನೆ. ನಂತರ ಹೆಂಡತಿ ಮೇಲೂ ಹಲ್ಲೆ ನಡೆಸಿದ್ದಾನೆ. ತೀವ್ರ ರಕ್ತಸ್ರಾವದಿಂದ ಫೈರೋಜ್ ಸ್ಥಳದಲ್ಲೇ ಮೃತಪಟ್ಟರೆ ಸಮೀರಾ ಅವರನ್ನು ಆಸ್ಪತ್ರೆಗೆ ದಾಖಲಿಸಲಾಯಿತು. ಆರೋಪಿ ರಸುಲ್‌ನನ್ನು ಸ್ಥಳೀಯರು ಪೊಲೀಸರಿಗೆ ಒಪ್ಪಿಸಿದ್ದಾರೆ. ಕೊಣನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆ : ನಿಖರ ಮಾಹಿತಿಗೆ ಸೂಚನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆಗೆ ಜವಾಬ್ದಾರಿಯಿಂದ ಪಾಲ್ಗೊಳ್ಳಬೇಕು ಎಂದು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ರಾಜೇಶ್ ಚವ್ಹಾಣ್ ತಿಳಿಸಿದ್ದಾರೆ. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ರಾಜ್ಯದ ಸಾಮಾಜಿಕ ಮತ್ತು ಶೈಕ್ಷಣಿಕ–2025ರ ಮನೆ ಮನೆ ಸಮೀಕ್ಷೆಯನ್ನು ಸೆ. 22ರಿಂದ ಅ. 7ರ ವರೆಗೆ ರಾಜ್ಯಾದ್ಯಂತ ಹಮಿಕೊಂಡಿದೆ. ಸಮೀಕ್ಷೆಯಲ್ಲಿ ಪ್ರಶ್ನಾವಳಿಯಲ್ಲಿ ಸುಮಾರು 60 ಪ್ರಶ್ನೆಗಳಿದ್ದು, ಪ್ರಶ್ನಾವಳಿಯಲ್ಲಿ ವ್ಯಾಪಾರ, ಉದ್ಯೋಗ, ವಿದ್ಯಾರ್ಹತೆ, ಕೌಶಲ ತರಬೇತಿ ಅಗತ್ಯತೆ. ಆದಾಯ, ಕುಟುಂಬದ ಸ್ಥಿರ ಮತ್ತು ಚರಾಸ್ತಿ ವಿವರಗಳು, ಧರ್ಮ, ಜಾತಿ, ಉಪಜಾತಿ, ಕುಲಕಸುಬು ಮುಂತಾದ ಮಾಹಿತಿಗಳ ಬಗ್ಗೆ ಪ್ರಶ್ನೆಗಳು ಇರುತ್ತವೆ. ಪ್ರತಿ ಕುಟುಂಬವು ಮಾಹಿತಿ ನೀಡಲು ಪಡಿತರ ಚೀಟಿ, ಆಧಾರ್ ಕಾರ್ಡ್ ಸಂಖ್ಯೆ, ಮತದಾರರ ಗುರುತಿನ ಚೀಟಿ, ವಿಕಲ ಚೇತನವಾಗಿದ್ದಲ್ಲಿ ಅಲ್ವಾ ಯು.ಐ.ಡಿ ಕಾರ್ಡ್ ಅಥವಾ ಪ್ರಮಾಣ ಪತ್ರಗಳನ್ನು ಸಿದ್ಧವಾಗಿಟ್ಟುಕೊಳ್ಳಬೇಕು. ಸಮೀಕ್ಷೆ ವೇಳೆ ಇ–ಕೆವೈಸಿ ಪ್ರಕ್ರಿಯೆಗಾಗಿ ಓಟಿಪಿ ಸಂಖ್ಯೆ ಸದಸ್ಯರ ಆಧಾ ರ್ ನಂಬರ್‌ಗೆ ಜೋಡಣೆ ಆಗಿರುವ ಮೊಬೈಲ್ ನಂಬರ್‌ಗೆ ಬರುತ್ತದೆ. ಒಂದು ವೇಳೆ ಸದಸ್ಯರು ಮನೆಯಲ್ಲಿ ಇಲ್ಲದಿದ್ದರೆ ಕುಟುಂಬದ ಪರವಾಗಿ ಉತ್ತರ ನೀಡುತ್ತಿರುವ ಸದಸ್ಯರು ಫೋನ್ ಮೂಲಕ ಓಟಿಪಿ ಪಡೆದು ಮಾಹಿತಿ ನೀಡಬೇಕಾಗಿರುತ್ತದೆ.

ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಸುಮಾರು 88,634 ಮನೆಗಳಿದ್ದು ಅದರಲ್ಲಿ ನಗರ ಪ್ರದೇಶದಲ್ಲಿ 18859 ಮತ್ತು ಗ್ರಾಮೀಣ ಪ್ರದೇಶದಲ್ಲಿ 69,775 ಮನೆಗಳಿವೆ. 8 ವರ್ಷ ಮೇಲ್ಪಟ್ಟ ಪ್ರತಿಯೊಬ್ಬ ಸದಸ್ಯನಿಗೂ ಆಧಾರ್ ಕಡ್ಡಾಯವಾಗಿದೆ. ಆಧಾರ್ ಇಲ್ಲದಿದ್ದರೆ ಹತ್ತಿರದ ಆಧಾರ್ ನೋಂದಣಿ ಕೇಂದ್ರದಲ್ಲಿ ವಿವರಗಳನ್ನು ನೋಂದಾಯಿಸಿ ನೊಂದಣಿ ಸಂಖ್ಯೆಯನ್ನು ಪಡೆದುಕೊಂಡು ಸಮೀಕ್ಷೆಯಲ್ಲಿ ಭಾಗವಹಿಸಬಹುದು. ಹಾಗೆಯೇ ಮೊಬೈಲ್ ನಂಬರ್ ಆಧಾರ್ ನಂಬರ್‌ಗೆ ಲಿಂಕ್ ಆಗಿಲ್ಲದಿದ್ದರೆ ಅದನ್ನು ತಕ್ಷಣವೇ ಲಿಂಕ್ ಮಾಡಿಸಿಕೊಳ್ಳಬೇಕು ಎಂದಿದ್ದಾರೆ.

# ಮನೆ ಬಾಗಿಲು ಮುರಿದು ಚಿನ್ನಾಭರಣ ಕಳವು

ಸಕಲೇಶಪುರ: ಸಮೀಪದ ಬಾಳೆಗದ್ದೆಯ ಮನೆಯೊಂದರಲ್ಲಿ 2.40 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿರುವ ಘಟನೆ ನಡೆದಿದೆ.

ಬಸವರಾಜು ಎಂಬುವವರ ಮನೆಯಲ್ಲಿ ಕಳ್ಳತನವಾಗಿದೆ. ತಂದೆಯ ಅನಾರೋಗ್ಯ ಹಿನ್ನಲೆಯಲ್ಲಿ ಸೆ. 11 ರಂದು ಹಾಸನದ ಆಸ್ಪತ್ರೆಗೆ ಕರೆದುಕೊಂಡು ಬಂದಿದ್ದರು. ವಾಪಸ್ ಮನೆಗೆ ಹೋದಾಗ ಗೇಟ್‌ನಿಂದ ಯುವಕನನೊಬ್ಬ ಓಡಿ ಹೋಗಿದ್ದು ಕಂಡಿದೆ.

ಬೀರುವಿನಲ್ಲಿಟ್ಟಿದ್ದ 14 ಗ್ರಾಂ ತೂಕದ ಒಂದು ಚಿನ್ನದ ಚೈನ್, 8 ಗ್ರಾಂ ತೂಕದ ಚಿನ್ನದ ಉಂಗುರ, 8 ಗ್ರಾಂ ತೂಕದ ಚಿನ್ನದ ಒಂದು ಜೊತೆ ಓಲೆ ಕಳವು ಮಾಡಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಹಾಸನದಲ್ಲಿ ಅ. 30 ರಂದು ಬೃಹತ್ ಉದ್ಯೋಗ ಮೇಳ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಜಿಲ್ಲೆಯ ಯುವ ಜನತೆಗೆ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ಬೃಹತ್ ಉದ್ಯೋಗ ಮೇಳ ವನ್ನು ಅ.30 ರಂದು ನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಆಯೋಜನೆಗೆ ಕ್ರಮ ಕೈಗೊಳ್ಳುವಂತೆ ಸಂಸದ ಶ್ರೇಯಸ್ ಪಟೇಲ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಉದ್ಯೋಗ ಮೇಳ ಕುರಿತು ಅಧಿಕಾರಿಗಳೊಂದಿಗೆ ಪೂರ್ವ ಸಿದ್ಧತಾ ಸಭೆ ನಡೆಸಿ ಮಾತನಾಡಿದ ಅವರು, ಯುವ ಜನತೆ ಮೇಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ನಿಟ್ಟಿನಲ್ಲಿ ಗ್ರಾಮೀಣ ಮಟ್ಟದಿಂದಲೂ ಪ್ರಚಾರ ನೀಡಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಉದ್ಯೋಗ ಮೇಳದ ಕುರಿತು ಎಲ್ಲೆಡೆ ಮಾಹಿತಿಗಾಗಿ ಪೋಸ್ಟರ್‌ಗಳನ್ನು ಅಳವಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು, ಉದ್ಯೋಗ ಮೇಳದಲ್ಲಿ ಭಾಗವಹಿಸಲು ನೊಂದಣಿ ಮಾಡಿಕೊಳ್ಳುವಂತೆ ಅರಿವು ಮೂಡಿಸಿ ಎಂದು ತಿಳಿಸಿದರು.

ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ ಡಿಪ್ಲೋಮಾ, ಪದವಿ ವ್ಯಾಸಂಗ ಮಾಡಿರುವರಿಗೂ ಕೂಡ ಉದ್ಯೋಗ ಕಲ್ಪಿಸಲು ಹೆಚ್ಚಿನ ಉದ್ಯೋಗದಾತ ಕಂಪನಿಗಳನ್ನು ಆಹ್ವಾನಿಸುವಂತೆ ಉದ್ಯೋಗಾಧಿಕಾರಿಗಳಿಗೆ ಸೂಚಿಸಿದರು.

ತಾಲ್ಲೂಕು ಮಟ್ಟದಲ್ಲಿಯೂ ಕೂಡ ತಹಶೀಲ್ದಾರ್ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳು ಸಭೆಯ ಸ್ಥಳೀಯವಾಗಿ ಯುವ ಜನರು ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಕೊಂಡು ಭಾಗವಹಿಸಲು ಅರಿವು ಮೂಡಿಸುವಂತೆ ತಿಳಿಸಿದರು.

ಜಿಲ್ಲಾಧಿಕಾರಿ ಕೆ.ಎಸ್ ಲತಾ ಕುಮಾರಿ ಮಾತನಾಡಿ, ಕೃಷಿ ಪ್ರಧಾನವಾದ ಜಿಲ್ಲೆಯಾಗಿರುವುದರಿಂದ ಕೃಷಿ ಒತ್ತು ನೀಡುವ ಕಂಪನಿಗಳನ್ನು ಉದ್ಯೋಗ ಮೇಳಕ್ಕೆ ಆಹ್ವಾನಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಕಾಧಿಕಾರಿ ಬಿ.ಆರ್. ಪೂರ್ಣಿಮಾ ಮಾತನಾಡಿ, ಗ್ರಾ.ಪಂ. ಹಂತದಲ್ಲಿ ಹೆಚ್ಚಿನ ಪ್ರಚಾರ ಮಾಡಲು ಅಧಿಕಾರಿಗಳಿಗೆ ನಿರ್ದೇಶನ ನೀಡಿ ಹೆಚ್ಚಿನ ಯುವ ಜನತೆ ಉದ್ಯೋಗ ಮೇಳದಲ್ಲಿ ಭಾಗವಹಿಸುವಂತೆ ಉತ್ತೇಜಿಸಲಾಗುವುದು ಎಂದು ತಿಳಿಸಿದರು.

ಈ ವೇಳೆಯಲ್ಲಿ ಇಂಡಿಯಾ ಸ್ಕಿಲ್ಸ್–2025ರ ಕುರಿತಾದ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಸಭೆಯಲ್ಲಿ ಜಿಲ್ಲಾ ಉದ್ಯೋಗಧಿಕಾರಿ ವಿಜಯಲಕ್ಷ್ಮಿ ಹಾಗೂ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಬೇಲೂರಿನ ಕೆರೆಗಳಿಗೆ ಎತ್ತಿನಹೊಳೆ ನೀರು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಅರಣ್ಯ ಇಲಾಖೆ ತಕರಾರಿನಿಂದ ಕಾಲುವೆ ನಿರ್ಮಾಣವಾಗದೆ ಪೋಲಾಗುತ್ತಿದ್ದ ಎತ್ತಿನಹೊಳೆ ನೀರನ್ನು ತಾಲ್ಲೂಕಿನ ಕೆರೆಗಳಿಗೆ ಹರಿಸಲಾಗುತ್ತಿದೆ.

ಈ ಬಾರಿ ಮಳೆಗಾಲದಲ್ಲಿ ಸಂಗ್ರಹವಾದ ನೀರನ್ನು ಮೇಲೆತ್ತಬೇಕಾದ ಅನಿವಾರ್ಯತೆ ಮತ್ತು ಮೋಟರ್‌ಗಳ ಪರೀಕ್ಷಾ ಕಾರ್ಯ ನಡೆಯುತ್ತಿರುವುದರಿಂದ ನೀರನ್ನು ವ್ಯರ್ಥವಾಗಿ ಹೇಮಾವತಿ ನದಿಗೆ ಮತ್ತು ಚಿತ್ರದುರ್ಗ ಜಿಲ್ಲೆಯಲ್ಲಿರುವ ವಾಣಿವಿಲಾಸ ಸಾಗರಕ್ಕೆ ಹರಸಲಾಗುತ್ತಿತ್ತು. ಈ ನೀರನ್ನು ಸದ್ಬಳಕೆ ಮಾಡಿಕೊಂಡು ಬೇಲೂರು ತಾಲ್ಲೂಕಿನಲ್ಲಿರುವ ಕೆರೆಗಳ ಭರ್ತಿಗೆ ಕ್ರಮ ವಹಿಸಲಾಗಿದೆ.

ಗುರುವಾರ ಶಾಸಕ ಹೆಚ್. ಕೆ.ಸುರೇಶ್ ಅವರ ನೇತೃತ್ವದಲ್ಲಿ ಬೇಲೂರು ತಾಲ್ಲೂಕಿನ ಬೆಟ್ಟದಾಲೂರು ಗ್ರಾಮದ ಹತ್ತಿರವಿರುವ ಎತ್ತಿನಹೊಳೆ ನೀರಾವರಿ ಯೋಜನೆಯ ಕಾಗೆದಹಳ್ಳಿ ಎಕ್ಸಿಟ್ ಗೇಟ್ ಬಳಿ ಅಧಿಕಾರಿಗಳು ಹಾಗು ರೈತ ಪ್ರತಿನಿಧಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ನೀರನ್ನು ಮುಂದಕ್ಕೆ ಹರಿಸುವ ಕುರಿತು ತಕ್ಷಣ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು.

ಇದೇ ವೇಳೆ ಅಧಿಕಾರಿಗಳು, ಶಾಸಕರು ಕಾಗೆದಹಳ್ಳಿ ಎಕ್ಸಿಟ್ ಗೇಟ್‌ನಲ್ಲಿ ನೀರಿನ ಹರಿವು ಪರಿಶೀಲನೆ ನಡೆಸಿ, ನೀರಿನ ಹಂಚಿಕೆ ರೈತರೊಂದಿಗೆ ಸಮಾಲೋಚನೆ ನಡೆಸಿ, ಸಮನ್ವಯದ ಆಧಾರದ ಮೇಲೆ ಮುಂದಿನ ದಿನಗಳಲ್ಲಿ ನಿರಂತರ ನೀರಾವರಿ ವ್ಯವಸ್ಥೆ ಕಲ್ಪಿಸುವ ಬಗ್ಗೆ ಚರ್ಚಿಸಲಾತಿಯಿತು. ಅಧಿಕಾರಿಗಳು ನಿರ್ದೇಶನದಂತೆ ನೀರು ಬಿಡುಗಡೆ ಮಾಡುವುದರಿಂದ ಮಾದಿಹಳ್ಳಿ ಹಾಗು ಹಳೇಬೀಡು ಹೋಬಳಿಯ ಅನೇಕ ಗ್ರಾಮಗಳ ಕೆರೆಗಳಿಗೆ ಜೀವಕಳೆ ಬಂದಂತಾಗಿದೆ. ಮುಂದಿನ ದಿನಗಳಲ್ಲಿ ಬೇಲೂರು ತಾಲ್ಲೂಕಿನ ಕೋಮಾರನಹಳ್ಳಿ, ವಡ್ಡರಹಳ್ಳಿ, ಅಡಗೂರು, ಗೋಣಿಸೋಮನಹಳ್ಳಿ, ದಾಸ ಗೋಡನಹಳ್ಳಿ, ಘಟ್ಟದಹಳ್ಳಿ, ಲಿಂಗಪ್ಪನ ಕೊಪ್ಪಲು, ದ್ಯಾವಪ್ಪನಹಳ್ಳಿ ಸೇರಿ ಹಲ ಹಳ್ಳಿಗಳ ಕೆರೆಗಳು ತುಂಬಿಕೊಳ್ಳುವುದರಿಂದ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗಲಿದೆ ಎಂದು ರೈತರು ಸಂತೋಷ ವ್ಯಕ್ತಪಡಿಸಿದ್ದಾರೆ.

# ಡಿಜೆ ಅಬ್ಬರಕ್ಕೆ ಕಿಟಕಿ ಗಾಜು ಪುಡಿ ಪುಡಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹೊಳೆನರಸೀಪುರ: ಗಣೇಶೋತ್ಸವ ಮೆರವಣಿಗೆಯಲ್ಲಿ ಡಿಜೆ ಹಾಕುವಂತಿಲ್ಲವೆಂಬ ಸರ್ಕಾರದ ಕಟ್ಟುನಿಟ್ಟಿನ ಆದೇಶದ ನಡುವೆಯೂ ಪಟ್ಟಣದಲ್ಲಿ ಬುಧವಾರ ರಾತ್ರಿ ಮಾರ್ದನಿಸಿದ ಡಿಜೆ ಅಬ್ಬರಕ್ಕೆ ಪೇಟೆ ಮುಖ್ಯ ರಸ್ತೆಯ ಅಂಗಡಿ ಮತ್ತು ಮನೆಗಳ ಗಾಜು ಪುಡಿ ಪುಡಿಯಾಗಿದೆ.

ಸರ್ಕಾರದ ನಿಯಮ ಉಲ್ಲಂಘಿಸಿ ಡಿಜೆಯನ್ನು ಬಳಸಲಾಗಿದೆ. ಆದರೆ ಸೌಂಡ್ ಸಿಸ್ಟಂ ಇಷ್ಟೇ ಮಿತಿಯಲ್ಲಿರಬೇಕೆಂಬ ನಿಯಮ ಇರುತ್ತದೆ. ಖುದ್ದಾಗಿ ಪೊಲೀಸರೇ ಅದನ್ನು ನಿರ್ವಹಣೆ ಮಾಡುತ್ತಾರೆ. ಆದರೆ ಪಟ್ಟಣದಲ್ಲಿ ಬುಧವಾರ ರಾತ್ರಿ ಪಟ್ಟಣದಲ್ಲಿ ನಡೆದ ಗಣೇಶ ಮೂರ್ತಿ ಮೆರವಣಿಗೆಯಲ್ಲಿ ಹಾಕಿದ್ದ ಡಿಜೆ ಶಬ್ದ ಸಾರ್ವಜನಿಕರಲ್ಲಿ ಭಯ ಮೂಡಿಸಿತು.

ಡಿಜೆ ಶಬ್ದವು ಪಟ್ಟಣದಿಂದ ಸುಮಾರು 2 ಕಿ.ಮೀ. ವರೆಗೆ ಜೋರಾಗಿ ಕೇಳುವಂತಿತ್ತು. ಅದರಿಂದ ರಸ್ತೆ ಪಕ್ಕದ ಜ್ಯುವೆಲ್ಲರಿ ಶಾಪ್ ಹಾಗೂ ಮನೆಗಳ ಗಾಜಿನ ಕಿಟಕಿಗಳು ಅದುರಿದವು. ಮನೆ ಮತ್ತು ಅಂಗಡಿಯ ಶೋಕೇಸ್‌ಗಳಲ್ಲಿ ಇಟ್ಟ ಪದಾರ್ಥಗಳು ನೆಲಕ್ಕುರುಳಿ ನಷ್ಟ ಉಂಟಾಗಿದೆ. ಹೃದಯ ರೋಗಿಗಳು, ಮಕ್ಕಳು, ಗರ್ಭಿಣಿಯರು ಭಯಭೀತರಾದರು.

# ದೈಹಿಕ–ಮಾನಸಿಕ ಸದೃಢತೆಗೆ ಪೌಷ್ಟಿಕ ಆಹಾರ ಮುಖ್ಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ಮಕ್ಕಳ ಬೆಳವಣಿಗೆಗೆ ಪೌಷ್ಟಿಕ ಆಹಾರ ಅವಶ್ಯಕವಾಗಿದ್ದು, ದೈಹಿಕ ಹಾಗೂ ಮಾನಸಿಕ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಆರೋಗ್ಯಯುತ ಸಮಾಜ ನಿರ್ಮಾಣಕ್ಕೆ ಪೌಷ್ಟಿಕ ಆಹಾರ ಸೇವಿಸಬೇಕೆಂದು ಜೆಎಂ–ಎಫ್‌ಸಿ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ವಿ.ಕುಸುಮ ಹೇಳಿದರು.

ತಾಲ್ಲೂಕಿನ ಶ್ರವಣಬೆಳಗೊಳ ಹೋಬಳಿ ಸುಂಡಹಳ್ಳಿ ಗ್ರಾಮದ ಸಮುದಾಯ ಭವನದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೊಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಿಶು ಅಭಿವೃದ್ಧಿ ಇಲಾಖೆ, ತಾಲ್ಲೂಕು ಕಾನೂನು ಸೇವಾ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಪೌಷ್ಟಿಕ ಆಹಾರ ಸಪ್ತಾಹ ಉದ್ಘಾಟಿಸಿ ಮಾತನಾಡಿದರು.

ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಅಗತ್ಯವಿರುವ ಸಮತೋಲಿತ ಪೌಷ್ಟಿಕ ಆಹಾರ ಮುಖ್ಯ. ದೇಹದ ಬೆಳವಣಿಗೆ ಹಾಗೂ ಬುದ್ಧಿಶಕ್ತಿಗೆ ವೃದ್ಧಿಗೆ ಅದು ನೆರವಾಗುತ್ತದೆ. ತೂಕ, ಎತ್ತರ ಮತ್ತು ಬೆಳವಣಿಗೆಗೆ ಯಾವ ಆಹಾರ ಸೇವಿಸಬೇಕು, ಪೌಷ್ಟಿಕಾಂಶ, ಕಾರ್ಬೋಹೈಡ್ರೇಟ್, ಕೊಬ್ಬು, ವಿಟಮಿನ್ ಮುಂತಾದವುಗಳ ಬಗ್ಗೆ ಜಾಗೃತಿ ಮೂಡಿಸಿ ಆರೋಗ್ಯವಂತ ಸಮಾಜ ನಿರ್ಮಾಣ ಮಾಡುವುದು ನಮೆಲ್ಲರ ಜವಾಬ್ದಾರಿ ಎಂದು ಹೇಳಿದರು.

ಸಹಾಯಕ ಅಭಿಯೋಜಕಿ ಸುನೀತ ಮಾತನಾಡಿ, ಮಕ್ಕಳ ಭವಿಷ್ಯವು ಅವರ ಆರೋಗ್ಯವನ್ನು ಅವಲಂಬಿಸಿದೆ. ಇತ್ತೀಚಿನ ದಿನಗಳಲ್ಲಿ ಪೋಷಕರು ಪೌಷ್ಟಿಕ ಆಹಾರ ಸೇವನೆಗಿಂತ ಜಂಕ್‌ಫುಡ್ ಆಹಾರಕ್ಕೆ ಆದ್ಯತೆ ನೀಡುತ್ತಿದ್ದಾರೆ. ಅವು ತಾತ್ಕಾಲಿಕ ತೃಪ್ತಿಯನ್ನು ನೀಡಿದರೂ ದೀರ್ಘಕಾಲದ ಆರೋಗ್ಯಕ್ಕೆ ಹಾನಿಕಾರಕವಾಗಿದೆ. ತ್ವರಿತ ಆಹಾರ (ಫಾಸ್ಟ್ ಫುಡ್) ಸೇವನೆಯಿಂದ ಪೌಷ್ಟಿಕಾಂಶದ ಕೊರತೆ ಹೆಚ್ಚುತ್ತಿದ್ದು, ದೇಹದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ ಎಂದರು.

ಹಾಲು, ಮೊಸರು, ತಾಜಾ ಹಣ್ಣು, ಹಸಿರು ತರಕಾರಿ, ಧಾನ್ಯ ಹಾಗೂ ನೈಸರ್ಗಿಕ ಆಹಾರ ಪದಾರ್ಥಗಳಲ್ಲಿ ಮಕ್ಕಳಿಗೆ ಬೇಕಾಗಿರುವ ವಿಟಮಿನ್‌ಗಳು, ಖನಿಜಗಳು ಮತ್ತು ಪ್ರೋಟೀನುಗಳು ದೊರೆಯುತ್ತವೆ.

ಪೌಷ್ಟಿಕ ಆಹಾರ ಸೇವನೆ ಮೂಲಕ ಆರೋಗ್ಯವಂತರಾಗಿ ದೇಹದ ಶಕ್ತಿಯನ್ನು ಹೆಚ್ಚಿಸಿಕೊಳ್ಳಬೇಕು.

ಈ ನಿಟ್ಟಿನಲ್ಲಿ ಪೋಷಕರು ತಮ ಪೌಷ್ಟಿಕ ಆಹಾರ ನೀಡಿ ಪೋಷಣೆ ಮಾಡಬೇಕು ಎಂದರು.

ಒತ್ತಡದ ಬದುಕಿಗೆ ಸಿಲುಕಿರುವ ನಾವು ಆರೋಗ್ಯಕ್ಕೆ ಆದ್ಯತೆ ನೀಡುತ್ತಿಲ್ಲ. ದಿನಕ್ಕೆ 6 ರಿಂದ 8 ಗಂಟೆ ನಿದ್ರೆ ಮಾಡಬೇಕಾದರೂ ಅನೇಕರು ಮೊಬೈಲ್ ಗೀಳಿಗೆ ಬಲಿಯಾಗಿದ್ದೇವೆ. ಯುವಕರು ಬಹುತೇಕ ಸಮಯವನ್ನು ಸಾಮಾಜಿಕ ಜಾಲತಾಣಗಳಲ್ಲೇ ಕಳೆಯುತ್ತಾರೆ. ಇದು ಒಂದು ರೀತಿ ವ್ಯಸನವಾಗಿದ್ದು ಆಧುನಿಕ ತಂತ್ರಜ್ಞಾನ ಅಭಿವೃದ್ಧಿ ಜೊತೆಗೆ ಹಾನಿಯನ್ನು ಮಾಡುತ್ತಿದೆ. ಈ ಬಗ್ಗೆ ಜಾಗೃತಿ ವಹಿಸುವುದು ತುರ್ತು ಅಗತ್ಯವೆಂದು ಹೇಳಿದರು.

ನಂತರ ನ್ಯಾಯಾಧೀಶರು, ವಕೀಲರು, ಅಂಗನವಾಡಿ ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಎತ್ತಿನಗಾಡಿ ಮೆರವಣಿಗೆ ಮೂಲಕ ಪೌಷ್ಟಿಕ ಆಹಾರದ ಬಗ್ಗೆ ಜಾಗೃತಿ ಜಾಥಾ ನಡೆಸಿದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಜಯರಾಮ್, ಗ್ರಾಮ ಪಂಚಾಯತಿ ಸದಸ್ಯ ಮಹೇಶ್, ವಕೀಲರ ಸಂಘದ ಉಪಾಧ್ಯಕ್ಷ ಡಿ.ಪಿ. ದಿನೇಶ್, ಕೆ. ಎಲ್. ಚೇತನ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಇಂದಿರಾ, ಮೇಲ್ವಿಚಾರಕಿ ಮಮತಾ ಹಾಗೂ ಅಂಗನವಾಡಿ ಕಾರ್ಯಕರ್ತರು ಇದ್ದರು.

# ಅಂತರ ಜಿಲ್ಲಾ ಜೂಜು ಕೋರರ ಬಂಧನ: 20 ಲಕ್ಷ ರೂ. ವಶ

ಹಾಸನ: ನಗರ ಹೊರವಲಯದ ಉದ್ದೂರಿನ ಸಾರ್ವಜನಿಕ ಸ್ಥಳದಲ್ಲಿ ಜೂಜಾಡುತ್ತಿದ್ದ ಜಿಲ್ಲೆ ಸೇರಿ ಅಂತರ ಜಿಲ್ಲೆಯ 11 ಜನರನ್ನು ಬಂಧಿಸಿರುವ ಪೊಲೀಸರು ಪಣಕ್ಕಿಟ್ಟಿದ್ದ 20 ಲಕ್ಷ ರೂ. ವಶಪಡಿಸಿಕೊಂಡಿದ್ದಾರೆ.

ಗುರುವಾರ ರಾತ್ರಿ 9.30ರ ಸಮಯದಲ್ಲಿ ಉದ್ದೂರು ಗ್ರಾಮ ಹತ್ತಿರದ ಲೇಔಟ್ ಪಕ್ಕದ ಸಾರ್ವಜನಿಕ ಸ್ಥಳದಲ್ಲಿ ಅಕ್ರಮವಾಗಿ ಜೂಜಾಡುತ್ತಿದ್ದಾರೆಂಬ ಖಚಿತ ಮಾಹಿತಿ ಮೇರೆಗೆ ಡಿಸಿಆರ್‌ಬಿ ಪಿಐ ವಿನಯ್ ಹಾಗೂ ಸಿಬ್ಬಂದಿ ದಾಳಿ ನಡೆಸಿದ್ದರು.

ಅರಸೀಕೆರೆ ತಾಲ್ಲೂಕು ಡಿ.ಎಂ. ಕುರ್ಕೆ ಗ್ರಾಮದ ತಮಯ್ಯ, ಸಕಲೇಶಪುರ ತಾಲ್ಲೂಕು ಚಂಗಡಿಹಳ್ಳಿಯ ಜಿತೇಂದ್ರ, ಯಸಳೂರಿನ ಜಲೇಂದ್ರ, ನಾಗಮಂಗಲ ತಾಲ್ಲೂಕು ಬೆಳ್ಳೂರು ಗ್ರಾಮದ ವಿಜಯಕುಮಾರ್, ತಿಪಟೂರು ತಾಲ್ಲೂಕು ಮಾರನಕೆರೆ ಗ್ರಾಮದ ಶಾಂತಪ್ಪ, ಬೆಣ್ಣೇನಹಳ್ಳಿಯ ಶಶಿ ಕುಮಾರ್, ಕಡೂರು ತಾಲ್ಲೂಕು ಚಿಕ್ಕಬೆಳ್ಳಿಕೆರೆಯ ಅಶೋಕ, ಅರಸೀಕೆರೆಯ ಸರ್ವರ್ ಖಾನ್, ಹಾಸನದ ಸುಮನ್, ಬೂವನಹಳ್ಳಿಯ ಕುಮಾರ್ ಹಾಗೂ ಅರಸೀಕೆರೆ ಮಾರುತಿ ನಗರದ ಕಿರಣ್ ಬಂಧಿತರು. ಪೆನ್ಷನ್ ಮೊಹಲ್ಲಾ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ರೋಟರಿ ಕ್ಲಬ್ ಆಫ್ ಸೆಂಟ್ರಲ್‌ನಿಂದ ಶಿಕ್ಷಕರ ದಿನಾಚರಣೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ರೋಟರಿ ಕ್ಲಬ್ ಆಫ್ ಸೆಂಟ್ರಲ್ ಹಾಸನ ವತಿಯಿಂದ ನಗರದ ಜಿಲ್ಲಾ ಕ.ಸಾ.ಪ. ಭವನದಲ್ಲಿ ಶಿಕ್ಷಕರ ದಿನ ಆಚರಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿದ ಕ್ಲಬ್ ಅಧ್ಯಕ್ಷ ರೊ. ಎಂ.ಡಿ. ನಾಗೇಶ್ ಮಾತನಾಡಿ, ಶಿಕ್ಷಕರು ಕೇವಲ ಪಾಠ ಹೇಳುವವರಲ್ಲ, ವಿದ್ಯಾರ್ಥಿಗಳ ಜೀವನ ರೂಪಿಸುವ ಶಿಲ್ಪಿಗಳು.ಸಮಾಜಕ್ಕೆ ನಿಷ್ಠಾವಂತ, ಜವಾಬ್ದಾರಿಯುತ ನಾಗರಿಕರನ್ನು ತಯಾರಿಸುವಲ್ಲಿ ಶಿಕ್ಷಕರ ಪಾತ್ರ ಅಪಾರ ಎಂದರು.

ಉಪನ್ಯಾಸಕ ಪ್ರಕಾಶ್ ಮೇಗಲಕೇರಿ ಮಾತನಾಡಿ, ಡಾ. ಎಸ್. ರಾಧಾಕೃಷ್ಣನ್ ಅವರ ಜನದಿನವನ್ನು ಶಿಕ್ಷಕರ ದಿನವಾಗಿ ಆಚರಿಸುವ ಪರಂಪರೆಯನ್ನು ಸರಿಸಿದರು. ಪ್ರಗತಿಶೀಲ ಸಮಾಜಕ್ಕೆ ಶಿಕ್ಷಣ ಮುಖ್ಯವಾಗಿದ್ದು ಅದಕ್ಕೆ ಆಧಾರ ಶಿಕ್ಷಕರು. ಅವರ ಪರಿಶ್ರಮದಿಂದಲೇ ವಿದ್ಯಾರ್ಥಿಗಳು ಜ್ಞಾನಪೂರ್ಣ ಭವಿಷ್ಯವನ್ನು ಕಟ್ಟಿಕೊಳ್ಳುತ್ತಾರೆ ಎಂದರು.

ಉಪನ್ಯಾಸಕ ಹರೀಶ ಅವರು ಮಾತನಾಡಿ, ಉತ್ತಮ ಸಮಾಜ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಬಹುದೊಡ್ಡದು. ಶಿಕ್ಷಕರ ಪರಿಶ್ರಮವಿಲ್ಲದೆ ಮಹತ್ತರವಾದ ಸಾಧನೆ ಯಾರಿಂದಲೂ ಸಾಧ್ಯವಿಲ್ಲವೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಿಕ್ಷಕರನ್ನು ಸನಾನಿಸಲಾಯಿತು. ಗೌರವ ಸ್ವೀಕರಿಸಿದ ಶಿಕ್ಷಕರು ತಮ ಅನುಭವ ಹಂಚಿಕೊಂಡು, ವಿದ್ಯಾರ್ಥಿಗಳ ಸಮಗ್ರ ಅಭಿವೃದ್ಧಿಗೆ ಬದ್ಧತೆ ಪ್ರದರ್ಶಿಸಿದರು. ಕ್ಲಬ್ ಕಾರ್ಯದರ್ಶಿ ರೊ. ಅಶೋಕ್, ಖಜಾಂಚಿ ಯೋಗೇಶ್ ಗೌಡ, ಭಾರತಿ, ಅನುಪಮ ವೇದಿಕೆಯಲ್ಲಿದ್ದರು. ಪುಟಾಣಿ ಇಶಾನ್ ಶಿಕ್ಷಕರ ಕುರಿತು ಮಾಡಿದ ಭಾಷಣ ಗಮನ ಸೆಳೆಯಿತು. ರೋ. ಬಿ.ಆರ್. ಬೊಮೇಗೌಡ ಕಾರ್ಯಕ್ರಮ ನಿರೂಪಿಸಿದರು. ನಭಾ ನಾಗೇಶ್ ಪ್ರಾರ್ಥಿಸಿದರು. ರೋ. ಆರ್.ಕೆ. ದಯಾನಂದ್ ವಂದಿಸಿದರು.

# ಇತಿಹಾಸದಲ್ಲಿ ಈ ದಿನ

## ಸೆಪ್ಟೆಂಬರ್ 13

1503: ಮಿಚೆಲ್ಯಾಂಜಲೋ ತನ್ನ ಪ್ರಸಿದ್ಧ ಡೇವಿಡ್ ಶಿಲ್ಪವನ್ನು ಫ್ಲೋರೆನ್ಸ್‌ನಲ್ಲಿ ಅನಾವರಣಗೊಳಿಸಿದರು.

1788: ಅಮೇರಿಕಾದ ನ್ಯೂಯಾರ್ಕ್ ನಗರವನ್ನು ಮೊದಲ ಬಾರಿಗೆ ಯುನೈಟೆಡ್ ಸ್ಟೇಟ್ಸ್‌ನ ತಾತ್ಕಾಲಿಕ ರಾಜಧಾನಿಯನ್ನಾಗಿ ಘೋಷಿಸಲಾಯಿತು.

1848: ಅಮೇರಿಕಾದ ರೈಲು ಕಾರ್ಮಿಕ ಫಿನಿಯಸ್ ಗೇಜ್ ತಲೆಗೆ ಉಕ್ಕಿನ ರಾಡ್ ತಗುಲಿದರೂ ಜೀವಂತ ಉಳಿದ ಪ್ರಸಿದ್ಧ ಘಟನೆ.

1923: ಸ್ಪೇನ್‌ನಲ್ಲಿ ಜನರಲ್ ಮಿಗುವೆಲ್ ಪ್ರಿಮೊ ದೆ ರಿವೇರಾ ನೇತೃತ್ವದಲ್ಲಿ ಸೈನಿಕ ತಂತ್ರಗಾರಿಕೆ () ನಡೆಯಿತು.

1948: ಇಂಡೋನೇಷ್ಯಾದ ರಾಜಕೀಯ ನಾಯಕ ಅಹದ್ ಸುಕರ್ಣೋ ದೇಶದ ಮೊದಲ ರಾಷ್ಟ್ರಪತಿಯಾಗಿ ಆಯ್ಕೆಯಾದರು.

1993: ಇಸ್ರೇಲ್ ಹಾಗೂ ಪ್ಯಾಲೆಸ್ಟೈನ್ ನಡುವೆ ಒಸ್ಲೋ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಅಮೆರಿಕಾ ಅಧ್ಯಕ್ಷ ಬಿಲ್ ಕ್ಲಿಂಟನ್ ಸಾಕ್ಷಿಯಾಗಿದ್ದರು.

### ಜನನ

1819: ಕ್ಲಾರಾ ಶೂಮನ್, ಜರ್ಮನ್ ಪಿಯಾನೋ ವಾದಕಿ ಮತ್ತು ಸಂಗೀತ ಸಂಯೋಜಕಿ

1876: ಶೆರ್ಲಾಕ್ ಹೋಮ್ಸ್‌ಕಾದಂಬರಿಗಳ ಲೇಖಕ ಆರ್ಥರ್ ಕೋನನ್ ಡೊಯಲ್ ಅವರ ಪತ್ನಿ ಜೀನ್ ಲೆಕ್ಕಿ

1908: ಎನ್.ಡಿ. ತಿವಾರಿ, ಭಾರತದ ಹಿರಿಯ ರಾಜಕಾರಣಿ

1916: ರೋಲ್ಡ್ ಡಾಲ್, ಪ್ರಸಿದ್ಧ ಇಂಗ್ಲಿಷ್ ಕಥೆಗಾರ (ಚಾರ್ಲಿ ಆಂಡ್ ದಿ ಚಾಕೋಲೇಟ್ ಫ್ಯಾಕ್ಟರಿ ಕೃತಿ)

### ಮರಣ

1592: ಮಿಚೆಲಾಂಜಲೋ ಮೆರಿಸಿ ದ ಕರವಾಜಿಯೋ, ಪ್ರಸಿದ್ಧ ಇಟಾಲಿಯನ್ ಚಿತ್ರಕಾರ

1946: ಅಮೇರಿಕದ ಪ್ರಸಿದ್ಧ ಸಾಹಿತಿ ಎಚ್.ಜಿ. ವೆಲ್ಸ್

1996: ಟೂಪಾಕ್ ಶಕೂರ್, ಅಮೆರಿಕದ ಪ್ರಸಿದ್ಧ ರ್‍ಯಾಪ್ ಗಾಯಕ

# ರಕ್ತದಾನ ಮತ್ತೊಬ್ಬರಿಗೆ ನೀಡಬಹುದಾದ ದೊಡ್ಡ ಕೊಡುಗೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ರಕ್ತದಾನವು ಮನುಷ್ಯನ ಆರೋಗ್ಯಕ್ಕೆ ಅವಶ್ಯಕವಾಗಿದ್ದು ತುರ್ತು ಸಂದರ್ಭದಲ್ಲಿ ಜೀವ ಉಳಿಸಲು ಹಾಗೂ ಆರೋಗ್ಯ ವೃದ್ಧಿಸಲು ಸಹಾಯ ಮಾಡುತ್ತದೆ ಎಂದು ಶ್ರವಣಬೆಳಗೊಳ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಅರುಣ್‌ಕುಮಾರ ಹೇಳಿದರು.

ತಾಲ್ಲೂಕಿನ ಶ್ರವಣ ಬೆಳಗೊಳದ ಗಣಪತಿ ಪೆಂಡಾಲ್‌ನಲ್ಲಿ ಪ್ರಸನ್ನ ಗಣಪತಿ ಸೇವಾ ಸಮಿತಿ ವತಿಯಿಂದ ಭಾರತಿಯ ರೆಡ್‌ಕ್ರಾಸ್, ಮೈಸೂರಿನ ನಾರಾಯಣ ಆಸ್ಪತ್ರೆ, ಅಮ ಕಣ್ಣಿನ ಆಸ್ಪತ್ರೆ, ಚನ್ನರಾಯಪಟ್ಟಣದ ಸ್ವಯಂ ಪ್ರೇರಿತ ರಕ್ತ ಕೇಂದ್ರ, ಗ್ರಾಮ ಪಂಚಾಯಿತಿ ಹಾಗೂ ಸಮುದಾಯ ಆರೋಗ್ಯ ಕೇಂದ್ರದ ಸಹಯೋಗದೊಂದಿಗೆ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿ, ರಕ್ತದಾನ ಜೀವ ದಾನವಾಗಿದ್ದು ಇದು ಮನುಷ್ಯನು ಮನುಷ್ಯನಿಗೆ ನೀಡಬಹುದಾದ ಅತಿದೊಡ್ಡ ಕೊಡುಗೆ. ಅನೇಕ ಅಪಘಾತ ಸಂದರ್ಭಗಳಲ್ಲಿ ಗಾಯಗೊಂಡ ಅಥವಾ ತೀವ್ರ ರಕ್ತಸ್ರಾವದಿಂದ ಬಳಲುತ್ತಿರುವ ರೋಗಿಗಳ ಜೀವ ರಕ್ಷಣೆ ಮಾಡಲು ಸಹಕಾರಿಯಾಗುವುದರ ಜೊತೆಗೆ ಅವಶ್ಯಕ ಸಮಯದಲ್ಲಿ ಜೀವನದ ಆಶಾಕಿರಣ ಒದಗಿಸುತ್ತದೆ ಎಂದರು. ರಕ್ತದಾನದಿಂದ ನಮ ಆರೋಗ್ಯಕ್ಕೂ ಸಹಾಯಕವಾಗಿದ್ದು, ನಮ ದೇಹದ ರಕ್ತದಲ್ಲಿರುವ ಕೊಲೆಸ್ಟ್ರಾಲ್ ಹೊರಹಾಕಿ ಹೊಸ ರಕ್ತದ ಉತ್ಪತ್ತಿಯಾಗುತ್ತದೆ. ಹೃದಯ ಘಾತ, ರಕ್ತದ ಒತ್ತಡವನ್ನು ನಿಯಂತ್ರಣದಲ್ಲಿಡಲು ಸಹಕಾರಿಯಾಗಿದೆ ಎಂದು ತಿಳಿಸಿದರು.



ಗ್ರಾಮ ಪಂಚಾಯಿತಿ ಅಧ್ಯಕ್ಷ ಅಫ್ತಾಬ್ ಪಾಷಾ ಮಾತನಾಡಿ, ರಕ್ತದಾನವು ಜನರ ನಡುವೆ ಸಹಕಾರ ಭಾವನೆಯ ಮೂಲಕ ಸಮಾಜದಲ್ಲಿ ಬಾಂಧವ್ಯ ಹೆಚ್ಚಿಸುತ್ತದೆ. ಇಂತಹ ಕಾರ್ಯಕ್ರಮಗಳು ಯುವಜನತೆಗೆ ಪ್ರೇರಣೆಯಾಗಿದ್ದು, ಗ್ರಾಮೀಣ ಭಾಗದಲ್ಲಿ ಉಚಿತ ಆರೋಗ್ಯ ಶಿಬಿರ ನಡೆಯುವುದರಿಂದ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಪುಷ್ಠಿ ನೀಡುತ್ತವೆ. ಮುಂದೆಯೂ ಇಂತಹ ಶಿಬಿರಗಳನ್ನು ಹೆಚ್ಚಾಗಿ ಆಯೋಜನೆ ಮಾಡಲಾಗುವುದು ಎಂದು ಹೇಳಿದರು.

ಇಸಿಜಿ, ಬಿಪಿ, ಶುಗರ್, ಕಣ್ಣು ಪರೀಕ್ಷೆ, ಕೀಲು ಮತ್ತು ಮೂಳೆ ತಪಾಸಣೆ, ಪ್ರಸೂತಿ ಮತ್ತು ಸ್ತ್ರೀ ರೋಗ ಸಂಬಂಧಿಸಿದಂತೆ ಸುಮಾರು 283 ಜನರ ತಪಾಸಣೆ ಮಾಡಲಾಯಿತು. 41 ಜನ ರಕ್ತದಾನ ಮಾಡಿದರು. ರಕ್ತದಾನ ಮಾಡಿದವರಿಗೆ ಪ್ರಮಾಣಪತ್ರ ನೀಡಲಾಯಿತು.

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಶರತ್‌ಕುಮಾರ್, ಎಸ್.ಟಿ. ಮಹೇಶ್, ಎಸ್. ಆರ್. ಲೋಕೇಶ್, ಭಾರತಿ ಚಂದ್ರೇಗೌಡ, ಪ್ರಸನ್ನ ಗಣಪತಿ ಸೇವಾ ಸಮಿತಿ ಪದಾಧಿಕಾರಿಗಳಾದ ಅಶೋಕ್, ಸುಕುಮಾರ್, ಗೋವಿಂದರಾಜ್, ನಾಗೇಂದ್ರ, ರಂಗಸ್ವಾಮಿ, ಡೋಲಿ ಅಶೋಕ್, ನವೀನ್, ಧರ್ಮರಾಜ್, ಸೋಮೇಶ್, ಸ್ವಯಂ ಪ್ರೇರಿತ ರಕ್ತ ಕೇಂದ್ರ ಮುಖ್ಯಸ್ಥ ಎಚ್.ಜಿ. ಭರತ್‌ಕುಮಾರ್, ನಾರಾಯಣ ಆಸ್ಪತ್ರೆಯ ಡಾ. ಜೀವನ್ ಇತರರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248